ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
ರಾಷ್ಟ್ರೀಯ ಸೇವಾ ಯೋಜನೆ

ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/04/ಐಡಿಪಿ/2017–18

ಸಂಯೋಜನಾಧಿಕಾರಿಯವರ ಕಛೇರಿ,
ಅರಮನೆ ರಸ್ತೆ ಬೆಂಗಳೂರು-01
ದಿನಾಂಕ:24-10-2017

**ಸುತ್ತೋಲೆ**

ವಿಷಯ: ರಾಷ್ಟ್ರೀಯ ಏಕತಾ ದಿನಾಚರಣೆ ಕುರಿತು.
ಉಲ್ಲೇಖ: ಪ್ರಾದೇಶಿಕ ನಿರ್ದೇಶನಾಲಯದ ಪತ್ರ ಸಂಖ್ಯೆ:No.22/NSS/2017/NUD Dated: 17-10-2017

*****

ಮೇಲಿನ ವಿಷಯಕ್ಕೆ ಸಂಬಧಿಸಿದಂತೆ ಮತ್ತು ಮೇಲಿನ ಉಲ್ಲೇಖದ ಸರ್ಕಾರದ ಪತ್ರದ ಅನುಸಾರ ರಂದು ದಿವಂಗತ ಸರ್ದಾರ್ ವಲ್ಲಭಬಾಯ್ ಪಟೇಲ್ ರವರ ಜನ್ಮದಿನದ ಪ್ರಯುಕ್ತ ದಿನಾಂಕ:31-10-2017 ರಂದು ರಾಷ್ಟ್ರೀಯ ಏಕತಾ ದಿನವನ್ನಾಗಿ ಆಚರಿಸುವಂತೆ ಸೂಚಿಸಲಾಗಿರುತ್ತದೆ. ಇದರ ಅಂಗವಾಗಿ ಎನ್.ಎಸ್.ಎಸ್. ಘಟಕಗಳಿಂದ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ರಾಷ್ಟ್ರೀಯ ಏಕತಾ ಪ್ರತಿಜ್ಞೆ, ಉಪನ್ಯಾಸ, ಚರ್ಚೆ ಪ್ರಬಂಧ ಸ್ಪರ್ದೆ ಮತ್ತು ಜಾಥ ಇನ್ನಿತರ ಕಾರ್ಯಕ್ರಮಗಳನ್ನು ನಡೆಸಲು ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.ರಾಷ್ಟ್ರೀಯ ಏಕತಾ ದಿವಸದ ಪ್ರತಿಜ್ಞೆ ಯನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದೆ.

ನಿರ್ದೇಶಕರು,

ಪ್ರತಿ:-

1. ರಾಜ್ಯದ ಎಲ್ಲಾ ಸರ್ಕಾರಿ /ಅನುದಾನಿತ/ಖಾಸಗಿ, , ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ -ಸೂಕ್ತ ಕ್ರಮಕ್ಕಾಗಿ
2. ಪ್ರಾದೇಶಿಕ ನಿರ್ದೇಶಕರು, ಎನ್ ಎಸ್ ಎಸ್ ಪ್ರದೇಶಿಕ ಕೇಂದ್ರ, ಬೆಂಗಳೂರು-04
3. ರಾಜ್ಯ ಸಂಪರ್ಕಾಧಿಕಾರಿ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಯುವಜನ ಸೇವಾ ಇಲಾಖೆ ಬೆಂಗಳೂರು-01
4. ಇ-ಆಡಳಿತ ವಿಭಾಗಕ್ಕೆ ವೆಬ್ ಸೈಟ್ ನಲ್ಲಿ ಪ್ರಕಟಿಸಲು
5. ಕಛೇರಿ ಕಡತಕ್ಕೆ

# ರಾಷ್ಟ್ರೀಯ ಏಕತಾ ದಿವಸದ ಪ್ರತಿಜ್ಞೆ

ರಾಷ್ಟ್ರದ ಐಕ್ಯತೆ, ಸಮಗ್ರತೆ ಮತ್ತು ಭದ್ರತೆಯನ್ನು ಕಾಪಾಡಲು ನನ್ನನ್ನು ಅರ್ಪಿಸಿಕೊಳ್ಳುತ್ತೇನೆ ಮತ್ತು ನನ್ನ ದೇಶ ಬಾಂಧವರಲ್ಲಿ ಈ ಸಂದೇಶವನ್ನು ಸಾರಲು ಶ್ರಮಿಸುತ್ತೇನೆ ಎಂದು ನಾನು ಶ್ರದ್ಧಾಪೂರ್ವಕವಾಗಿ ಪ್ರತಿಜ್ಞೆ ಮಾಡುತ್ತೇನೆ. ಸರ್ದಾರ್ ವಲ್ಲಭಬಾಯ್ ಪಟೇಲ್‌ರವರ ದೂರದೃಷ್ಟಿ ಮತ್ತು ಕಾರ್ಯಕ್ಷಮತೆಯಿಂದ ಸಾಧಿಸಿದ ರಾಷ್ಟ್ರೀಯ ಏಕೀಕರಣದ ಸ್ಫೂರ್ತಿಯನ್ನು ಕಾಪಾಡುತ್ತೇನೆ ಎಂದು ಪ್ರಮಾಣ ಮಾಡುತ್ತೇನೆ. ರಾಷ್ಟ್ರದ ಆಂತರಿಕ ಭದ್ರತೆಯನ್ನು ಖಾತ್ರಿ ಪಡಿಸಲು ನಾನುನನ್ನದೇ ಆದ ಕೊಡುಗೆಯನ್ನು ನೀಡುತ್ತೇನೆ ಎಂದು ಒಮ್ಮನಸ್ಸಿನಿಂದ ಪ್ರತಿಜ್ಞೆ ಮಾಡುತ್ತಿದ್ದೇನೆ.